## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯ ಕಡ್ಡಾಯ ಜೀವ ವಿಮಾ ಯೋಜನೆಯಡಿ ದಿನಾಂಕ: 01.04.2012 ರಿಂದ 31.03.2014ಕ್ಕೆ ಅಂತ್ಯಗೊಂಡ ದ್ವೈವಾರ್ಷಿಕ ಅವಧಿಗೆ ಮೌಲ್ಯಮಾಪನ ವರದಿಯ ಆಧಾರದ ಮೇಲೆ ಜೀವ ವಿಮಾ ಪಾಲಿಸಿಗಳ ಸ್ಥಿರಪಡಿಸಿದ ಮೊತ್ತದ ಮೇಲೆ ಬೋನಸ್ ನೀಡಲು ಸರ್ಕಾರದ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕೆಜಿಐಡಿ/ಎವಿಜಿ/2012-14-ವಿ.ಮೌ.ಮಾ/ 163/ 2017-18, ದಿನಾಂಕ:05.06.2017.

**ಪ್ರಸ್ತಾವನೆ:**

ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ ಇವರು ಮೇಲೆ ಓದಲಾದ ದಿನಾಂಕ: 05.06.2017ರ ಪತ್ರದಲ್ಲಿ ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯಲ್ಲಿ ನಿರ್ವಹಿಸಲಾಗುತ್ತಿರುವ ಕಡ್ಡಾಯ ವಿಮಾ ಯೋಜನೆಗೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರಿ ನೌಕರರ (ಕಡ್ಡಾಯ ಜೀವ ವಿಮಾ) ನಿಯಮಗಳು, 1958ರ ನಿಯಮ-22 ರನ್ವಯ ವಿಮಾ ಮೌಲ್ಯಮಾಪನವನ್ನು ದ್ವೈವಾರ್ಷಿಕವಾಗಿ ಮಂಡಿಸಬೇಕಾಗಿದ್ದು, ಅದರನ್ವಯ 2012-2014 ನೇ ದ್ವೈವಾರ್ಷಿಕ ಅವಧಿಯಲ್ಲಿ ಚಾಲ್ತಿಯಲ್ಲಿದ್ದ ವಿಮಾ ಪಾಲಿಸಿಗಳ ಮೌಲ್ಯಮಾಪನ ನಡೆಸಿ, ಅಧಿಲಾಭಾಂಶ ಘೋಷಿಸಲು ಅನುವಾಗುವಂತೆ ಮೌಲ್ಯಮಾಪನ ಕಾರ್ಯ ಕೈಗೊಳ್ಳಲು ವಿಮಾ ಗಣಕಕಾರರನ್ನು ನೇಮಿಸಲಾಗಿತ್ತೆಂದು ಮತ್ತು ವಿಮಾ ಗಣಕಕಾರರು 2012-14ನೇ ಅವಧಿಗೆ ಸಂಬಂಧಿಸಿದಂತೆ ಮೌಲ್ಯಮಾಪನ ಕಾರ್ಯವನ್ನು ಪೂರ್ಣಗೊಳಿಸಿ ಮೌಲ್ಯಮಾಪನ ವರದಿಯನ್ನು ಸಲ್ಲಿಸಿದ್ದಾರೆಂದು ವರದಿ ಮಾಡಿದ್ದಾರೆ. ಸದರಿ ಮೌಲ್ಯಮಾಪನ ವರದಿಯ ಪ್ರಮುಖ ಅಂಶಗಳು ಕೆಳಕಂಡಂತಿವೆ:-

| | | |
|---|---|---|
| 1. | ಚಾಲ್ತಿಯಲ್ಲಿದ್ದ ಪಾಲಿಸಿಗಳು | : ಸಂಖ್ಯೆ: 11,91,110 |
| 2. | ವಿಮಾ ಮೊಬಲಗು | : ರೂ. 14,994.43 ಕೋಟಿಗಳು |
| 3. | ಅಧಿಲಾಭಾಂಶ | : ರೂ. 6,288.84 ಕೋಟಿಗಳು |
| 4. | ವಾರ್ಷಿಕ ವಿಮಾ ಕಂತು ಆದಾಯ | : ರೂ. 770.62 ಕೋಟಿಗಳು |
| 5. | ಜೀವ ವಿಮಾ ನಿಧಿಯ ಶಿಲ್ಕು | : ರೂ. 7,368.38 ಕೋಟಿಗಳು |
| 6. | ಜೀವ ವಿಮಾ ನಿವ್ವಳ ಹೊಣೆಗಾರಿಕೆ | : ರೂ. 5,466.53 ಕೋಟಿಗಳು |
| 7. | ಮೌಲ್ಯಮಾಪನದ ಹೆಚ್ಚುವರಿ (Surplus) | : ರೂ. 1,901.85 ಕೋಟಿಗಳು |

ವಿಮಾ ಗಣಕರು ತಮ್ಮ ವರದಿಯಲ್ಲಿ ದಿನಾಂಕ:31.03.2014 ರಂದು ಚಾಲ್ತಿಯಲ್ಲಿರುವ ಎಲ್ಲಾ ಪಾಲಿಸಿಗಳಿಗೆ ಪ್ರತಿ ಸಾವಿರ ವಿಮಾ ಮೊತ್ತಕ್ಕೆ ಪ್ರತಿ ವರ್ಷಕ್ಕೆ ರೂ.90/- ರಂತೆ ಪ್ರತ್ಯಾವರ್ತಿ ಲಾಭಾಂಶವನ್ನು ಘೋಷಿಸಲು ಶಿಫಾರಸ್ಸು ಮಾಡಿರುತ್ತಾರೆ. ಈ ಉದ್ದೇಶಕ್ಕಾಗಿ ಮೌಲ್ಯಮಾಪನದಲ್ಲಿ ಒಟ್ಟಾರೆ ಹೆಚ್ಚಳವಾಗಿರುವ ರೂ.1,901.85 ಕೋಟಿಗಳಲ್ಲಿ ರೂ.1349.49 ಕೋಟಿಗಳಲ್ಲಿ ಲಾಭಾಂಶವಾಗಿ ವಿತರಣೆ ಮಾಡಲು ಹಾಗೂ ಉಳಿದ ರೂ.552.36ಕೋಟಿಗಳನ್ನು ಅವರ್ಗೀಕೃತವಾಗಿ ಮುಂದುವರಿಸಲ್ಪಟ್ಟ

2. .

ಮೊಬಲಗು ಎಂದು ಪರಿಗಣಿಸಿ ಮುಂದಿನ ಮೌಲ್ಯಮಾಪನ ಅವಧಿಗೆ ಕೊಂಡೊಯ್ಯಲು ವಿಮಾ ಗಣಕರು ಶಿಫಾರಸ್ಸು ಮಾಡಿರುತ್ತಾರೆ.

ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯು ವಿಮಾ ಗಣಕರು ಮೌಲ್ಯಮಾಪನ ವರದಿಯಲ್ಲಿ ಮಾಡಿರುವ ಶಿಫಾರಸ್ಸುಗಳನ್ನು ಪರಿಗಣಿಸಿ, ಅದನ್ನು ಒಪ್ಪಿಕೊಂಡು, ದಿನಾಂಕ:31.03.2014 ರಂದು ಚಾಲ್ತಿಯಲ್ಲಿದ್ದ ಪಾಲಿಸಿಗಳ ಮೇಲೆ ವಿಮಾ ಮೊತ್ತದ ಪ್ರತಿ 1000/- ರೂ.ಗಳಿಗೆ ವಾರ್ಷಿಕ 90/-ರೂ. ದರದಲ್ಲಿ ಬೋನಸ್ ನೀಡುವುದರ ಜೊತೆಗೆ ದಿನಾಂಕ: 01.04.2014 ರಿಂದ 31.03.2016 ಅವಧಿಯಲ್ಲಿ ಅವಧಿಪೂರ್ಣ, ಮರಣಜನ್ಯ, ವಿಮಾತ್ಯಾಗ ಆದ ಪಾಲಿಸಿಗಳಿಗೂ ಸಹ ಮುಂದಿನ ಮೌಲ್ಯಮಾಪನ ದಿನಾಂಕದವರೆಗೆ ಪ್ರತಿ 1000/-ರೂ.ಗಳಿಗೆ ವಾರ್ಷಿಕ 90/-ರೂ. ಮಧ್ಯಂತರ ಲಾಭಾಂಶವನ್ನು ನೀಡಲು ವಿಮಾ ಗಣಕರು ಶಿಫಾರಸ್ಸು ಮಾಡಿರುತ್ತಾರೆಂದು ತಿಳಿಸಿ, ಈ ಕೆಳಕಂಡ ನಿರ್ಧಿಷ್ಟ ಪ್ರಸ್ತಾವನೆಗಳಿಗೆ ಸರ್ಕಾರದ ಅನುಮೋದನೆ ಕೋರಿರುತ್ತಾರೆ:-

1) ದಿನಾಂಕ: 01-04-2012 ರಿಂದ 31-03-2014ರ ದ್ವೈವಾರ್ಷಿಕ ಮೌಲ್ಯಮಾಪನ ಅವಧಿಯಲ್ಲಿ ಚಾಲ್ತಿಯಲ್ಲಿದ್ದ ಎಲ್ಲಾ ಪಾಲಿಸಿಗಳಿಗೆ ಹಾಗೂ ಚಾಲ್ತಿಯಲ್ಲಿದ್ದ ಪ್ರತಿ ತಿಂಗಳ ಅವಧಿಯನ್ನು ಒಳಗೊಂಡಂತೆ ಪಾಲಿಸಿಗಳ ಸ್ಥಿರಪಡಿಸಿದ ವಿಮಾ ಮೊತ್ತದ ಮೇಲೆ ಪ್ರತಿ 1,000/-ರೂ.ಗಳಿಗೆ ಪ್ರತಿ ವರ್ಷಕ್ಕೆ ರೂ.90/-ರಂತೆ ಸರಳ ಪ್ರತ್ಯಾವರ್ತಿ ಲಾಭಾಂಶ (ಸಿಂಪಲ್ ರಿವರ್ಷನರಿ ಬೋನಸ್) ಘೋಷಿಸುವುದು.

2) ಅವಧಿಪೂರ್ಣ, ಮರಣಜನ್ಯ ಹಾಗೂ ವಿಮಾ ತ್ಯಾಗ ಮೌಲ್ಯಗಳಿಂದ ದಿನಾಂಕ:01-04-2014 ರಿಂದ 31-03-2016ರ ಅವಧಿಯಲ್ಲಿ ಹೊರ ಹೋಗಿರುವ ವಿಮಾ ಪಾಲಿಸಿಗಳಿಗೆ ಪ್ರತಿ 1,000/- ರೂ. ವಿಮಾ ಮೊತ್ತಕ್ಕೆ ಪ್ರತಿ ವರ್ಷಕ್ಕೆ ರೂ. 90/-ರಂತೆ ಮಧ್ಯಂತರ ಲಾಭಾಂಶವನ್ನು (ಇಂಟೀರಿಯಮ್ ಬೋನಸ್) ಘೋಷಿಸುವುದು.

ಸರ್ಕಾರವು ಈ ಪ್ರಸ್ತಾವನೆಯನ್ನು ವಿವರವಾಗಿ ಪರಿಶೀಲಿಸಿದೆ ಮತ್ತು ದಿನಾಂಕ:11.12.2017ರಂದು ಜರುಗಿದ ಸಚಿವ ಸಂಪುಟ ಸಭೆಯಲ್ಲಿ ಈ ಪ್ರಸ್ತಾವನೆಗಳಿಗೆ ಅನುಮೋದನೆ ಪಡೆದಿದೆ. ಅದರನ್ವಯ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 45 ಕವಿಇ 2017, ಬೆಂಗಳೂರು, ದಿನಾಂಕ:23-12-2017.**

ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯು ನಿರ್ವಹಿಸುತ್ತಿರುವ ಕಡ್ಡಾಯ ಜೀವ ವಿಮಾ ಯೋಜನೆಗೆ ಸಂಬಂಧಿಸಿದಂತೆ, 2012-2014ರ ದ್ವೈವಾರ್ಷಿಕ ಅವಧಿಗೆ ಮೌಲ್ಯಮಾಪನ ವರದಿಯನ್ನು

ಆಧರಿಸಿ ಈ ಕೆಳಕಂಡಂತೆ ಬೋನಸ್ ನೀಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

i) ದಿನಾಂಕ: 31.03.2014ರಂದು ಚಾಲ್ತಿಯಲ್ಲಿದ್ದ ಎಲ್ಲಾ ಪಾಲಿಸಿಗಳಿಗೆ 2012-2014ರ ದ್ವೈವಾರ್ಷಿಕ ಅವಧಿಯಲ್ಲಿ ವಿಮಾ ಮೊತ್ತದ ಪ್ರತಿ 1,000/-ರೂ.ಗಳಿಗೆ ವಾರ್ಷಿಕ 90/- ರೂ. ಬೋನಸ್ಸ್ ನೀಡುವುದು;

ii) ದಿನಾಂಕ:01.04.2014 ರಿಂದ 31.03.2016ರ ಅವಧಿಯಲ್ಲಿ ಅವಧಿಪೂರ್ಣ, ಮರಣ ಜನ್ಯ ಹಾಗೂ ವಿಮಾ ತ್ಯಾಗ ಮೌಲ್ಯಗಳಿಂದ ಹೊರಹೋಗಿರುವ ವಿಮಾ ಪಾಲಿಸಿಗಳಿಗೆ ಮುಂದಿನ ಮೌಲ್ಯಮಾಪನ ದಿನಾಂಕದವರೆಗೆ ಪ್ರತಿ ರೂ.1,000/-ಕ್ಕೆ ವಾರ್ಷಿಕ 90/- ರೂ. ಮಧ್ಯಂತರ ಬೋನಸ್ಸ್‌ನ್ನು ನೀಡುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

23.12.17

(ಯು.ಹೆಚ್. ನಾರಾಯಣಸ್ವಾಮಿ)
ಸರ್ಕಾರದ ಉಪ ಕಾರ್ಯದರ್ಶಿ
(ಆಡಳಿತ ಮತ್ತು ಸಮನ್ವಯ)
ಆರ್ಥಿಕ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ ಮುದ್ರಿತ 100 ಪ್ರತಿಗಳನ್ನು ಆರ್ಥಿಕ ಇಲಾಖೆಯ ಮುಂಗಡ ಶಾಖೆಗೆ ಕಳುಹಿಸುವಂತೆ ಕೋರಿದೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ತನಿಖೆ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
4. ಎಲ್ಲಾ ಉಪ ನಿರ್ದೇಶಕರುಗಳಿಗೆ/ಎಲ್ಲಾ ಜಿಲ್ಲಾ ವಿಮಾಧಿಕಾರಿಗಳಿಗೆ - ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಬೆಂಗಳೂರು, ಇವರ ಮುಖಾಂತರ.
5. ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ-ಪ್ರಕರಣ ಸಂಖ್ಯೆ: ಸಿ.779/2017, ದಿನಾಂಕ: 11.12.2017ರನ್ವಯ - ಮಾಹಿತಿಗಾಗಿ.
6. ಶಾಖಾಧಿಕಾರಿ, ಆರ್ಥಿಕ ಇಲಾಖೆ (ಗಣಕ ಕೋಶ), - ಆರ್ಥಿಕ ಇಲಾಖೆಯ ವೆಬ್‌ಸೈಟಿನಲ್ಲಿ ಅಪ್‌ಲೋಡ್ ಮಾಡುವ ಸಲುವಾಗಿ.
7. ಶಾಖಾರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

***